ದಿನಾಂಕ 06-04-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ**

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ. ಆದ್ದರಿಂದ ನಾನು ಹಾಜರುಪಡಿಸಿದ ದಾಖಲೆಗಳನ್ನು ನಿಶಾನೆಗೊಳಿಸಲು ವಿನಂತಿ.

ದಿನಾಂಕ 05-11-2018 ರ ಮೂಲ ಕ್ರಯಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಒಂದು ಸ್ಕೆಚ್ ಮ್ಯಾಪನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಮೂನೆ-10 ನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಆಕಾರ್ ಬಂದ್ ನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ತಹಸೀಲ್ದಾರರವರಿಗೆ ನೀಡಿದ ತಕರಾರಿನ ಅರ್ಜಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-5 ಎಂದು ಗುರುತಿಸಲಾಯಿತು. RRT No.43/2018-19 ರ ಆದೇಶದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-6 ಎಂದು ಗುರುತಿಸಲಾಯಿತು. ಒಂದು ಪಹಣಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಮುಟೇಷನ್ ಎಂ.ಆರ್. ನಂ.ಹೆಚ್-32/2018-19 ನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-8 ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ ಪ್ರತಿವಾದಿಗಳು ಮತ್ತು ಪ್ರತಿವಾದಿಗಳ ಪರ ವಕೀಲರು ಗೈರು ಹಾಜರಿರುತ್ತಾರೆ. ಆದರೂ ಸಹ ಪಾಟಿ ಸವಾಲಿಗೆ ಒಂದು ಅವಕಾಶ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು
ಜೇವರ್ಗಿ